ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

**ಸಂಖ್ಯೆ : ಸಿ7(2):ಪ್ರಾ.ಶಿ.ಅ:ಶುಲ್ಕ:30:2020-21** **ದಿನಾಂಕ : 05.09.2020**

**-: ಸುತ್ತೋಲೆ :-**

ವಿಷಯ : ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ 2020-21ನೇ ಸಾಲಿನಲ್ಲಿ ದಾಖಲಾತಿ ಹಾಗೂ ಶುಲ್ಕ ಪಡೆಯುವ ಕುರಿತು.

ಉಲ್ಲೇಖ : 1) ಆಯುಕ್ತರು, ಸಾ.ಶಿ.ಇಲಾಖೆ, ಬೆಂಗಳೂರು, ಇವರ ಸುತ್ತೋಲೆ ಸಂಖ್ಯೆ : ಸಹನಿಶಾಶಿ:ಆಶಾ:ಕ.ವೈ.ಕು.ಜಾ.ಸು:32544:ಇ.ವಿ.2020, ದಿನಾಂಕ : 13.03.2020.

2) ಆಯುಕ್ತರು, ಸಾ.ಶಿ.ಇಲಾಖೆ, ಬೆಂಗಳೂರು, ಇವರ ಸುತ್ತೋಲೆ ಸಂಖ್ಯೆ : ಸಹನಿಶಾಶಿ:ಆಶಾ:ಕ.ವೈ.ಕು.ಜಾ.ಸು:32544:ಇ.ವಿ.2020, ದಿನಾಂಕ : 24.03.2020.

- - -

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕೋವಿಡ್-19ರ ಹಿನ್ನೆಲೆಯಲ್ಲಿ ಉಲ್ಲೇಖ (1)ರ ಸುತ್ತೋಲೆಯಂತೆ ರಾಜ್ಯದ ಎಲ್ಲಾ ಶಾಲೆಗಳಿಗೆ ದಿನಾಂಕ ; 14.03.2020 ರಿಂದ ರಜೆಯನ್ನು ಘೋಷಿಸಲಾಗಿರುತ್ತದೆ.

2020-21ನೇ ಶೈಕ್ಷಣಿಕ ವರ್ಷವು ದಿನಾಂಕ : 01.06.2020 ರಿಂದ ಪ್ರಾರಂಭವಾಗಬೇಕಿತ್ತು. ಆದರೆ, ಕೋವಿಡ್-19ರ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಶಾಲಾ ಕಾಲೇಜುಗಳನ್ನು ನಿಗದಿತ ಸಮಯದಲ್ಲಿ ಪುನರಾರಂಭಿಸಲು ಸಾಧ್ಯವಾಗಿರುವುದಿಲ್ಲ.

ಉಲ್ಲೇಖ (2) ರ ಸುತ್ತೋಲೆಯಂತೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ 2020-21ನೇ ಶೈಕ್ಷಣಿಕ ವರ್ಷದ ದಾಖಲಾತಿ ಪ್ರಕ್ರಿಯೆಯನ್ನು ಸರ್ಕಾರದ ಮುಂದಿನ ಆದೇಶದರೆಗೆ ಮುಂದೂಡಲು ಸೂಚಿಸಲಾಗಿತ್ತು.

ದಿನಾಂಕ : 14.03.2020 ರಿಂದ ಶಾಲೆಗಳಿಗೆ ರಜೆಯನ್ನು ಘೋಷಿಸಿದ್ದರಿಂದ ವಿದ್ಯಾರ್ಥಿಗಳು ಸುಮಾರು 5 ತಿಂಗಳುಗಳಿಗೂ ಹೆಚ್ಚಿನ ಕಾಲ ಶೈಕ್ಷಣಿಕ ಚಟುವಟಿಕೆಗಳಿಂದ ದೂರವಾಗಿದ್ದಾರೆ. ಅಲ್ಲದೇ ಕೋವಿಡ್-19 ಹಿನ್ನೆಲೆಯಲ್ಲಿ ಭೌತಿಕ ಶಾಲೆಗಳ ಪುನರಾರಂಭದ ಕುರಿತು ಅನಿಶ್ಚಿತತೆ ಮುಂದುವರೆದಿರುವುದರಿಂದ, ಮಕ್ಕಳನ್ನು ಪರ್ಯಾಯ ಮಾರ್ಗವಾಗಿ ಸಂಪರ್ಕಿಸಿ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸದೇ ಇದ್ದಲ್ಲಿ ಅವರು ಕಲಿಕೆಯಲ್ಲಿ ಆಸಕ್ತಿಯನ್ನು ಕಳೆದುಕೊಳ್ಳುವ ಸಂಭವವಿರುತ್ತದೆ.

Scanned by CamScanner

ಮುಂದುವರೆದು ಹಲವು ಮಕ್ಕಳು ಶಾಲೆಯು ಪ್ರಾರಂಭವಾದ ನಂತರವೂ ಸಹ ಶಾಲೆಯಿಂದ ಹೊರಗುಳಿಯುವ ಸಾಧ್ಯತೆ ಇರುತ್ತದೆ. ಬಾಲಕಾರ್ಮಿಕ ಪದ್ಧತಿ ಮತ್ತು ಬಾಲ್ಯವಿವಾಹದಂತೆ ಪಿಡುಗುಗಳಿಗೆ ತುತ್ತಾಗುವ ಅಪಾಯವಿರುತ್ತದೆ. ಆದ್ದರಿಂದ, ಶಾಲೆಗಳು ಭೌತಿಕವಾಗಿ ಪ್ರಾರಂಭವಾಗುವವರೆಗೆ ಮಕ್ಕಳನ್ನು ಯುಕ್ತ ಪರ್ಯಾಯ ಮಾರ್ಗಗಳ ಮೂಲಕ ಸಂಪರ್ಕಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸುವ ಹಾಗೂ ನಿರಂತರ ಕಲಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಮಾಡುವುದು ಅವಶ್ಯಕವಾಗಿದೆ.

ಈ ನಿಟ್ಟಿನಲ್ಲಿ ಪ್ರಥಮ ಹಂತವಾಗಿ ಎಲ್ಲಾ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಅಥವಾ ಮಾನ್ಯತೆ ಪಡೆದ ಅನುದಾನರಹಿತ ಶಾಲೆಯಲ್ಲಿ ದಾಖಲಾಗಿರುವುದನ್ನು ಖಚಿತಪಡಿಸಬೇಕಾಗಿದೆ. ಆದ್ದರಿಂದ 2020–21ನೇ ಸಾಲಿನಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ದಿನಾಂಕ : 30.09.2020ರೊಳಗೆ ಪೂರ್ಣಗೊಳಿಸಲು ಎಲ್ಲಾ ಶಾಲೆಗಳಿಗೆ ಹಾಗೂ ಪೋಷಕರಿಗೆ ತಿಳಿಸಲಾಗಿದೆ.

ಖಾಸಗಿ ಅನುದಾನ ರಹಿತ ಶಾಲೆಗಳು ಮೊದಲನೇ ಕಂತಿನ ಅಧಿಕೃತ ಶುಲ್ಕವನ್ನು ಮಾತ್ರ ಪೋಷಕರಿಂದ ಪಡೆಯಲು ಅನುಮತಿ ನೀಡಲಾಗಿದೆ. ಆದರೆ, ಯಾವುದೇ ಕಾರಣಕ್ಕೂ ಕಳೆದ ವರ್ಷ ಪಡೆದ ಶುಲ್ಕಕ್ಕಿಂತ ಪ್ರಸ್ತುತ ವರ್ಷದ ಶುಲ್ಕವನ್ನು ಹೆಚ್ಚಿಸದಂತೆ ಸೂಚಿಸಿದೆ. ಕೋವಿಡ್–19 ಹಿನ್ನೆಲೆಯಲ್ಲಿ ಪೋಷಕರು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಪ್ರಸ್ತುತ ವರ್ಷದ ಶುಲ್ಕವನ್ನು ಹಿಂದಿನ ಸಾಲಿನ ಶುಲ್ಕಕ್ಕಿಂತ ಕಡಿಮೆ ಮಾಡಲು ಆಡಳಿತ ಮಂಡಳಿಗಳು ಮುಕ್ತವಾಗಿರುತ್ತವೆ.

ಶಾಲೆ ಹಾಗೂ ಶಿಕ್ಷಕರು ಮಕ್ಕಳೊಂದಿಗೆ ಸಂಪರ್ಕ ಸಾಧಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸುವ ಹಾಗೂ ನಿರಂತರ ಕಲಿಕೆಯನ್ನು ಮುಂದುವರೆಸುವುದಕ್ಕಾಗಿ ರಾಜ್ಯ ಸರ್ಕಾರವು **'ವಿದ್ಯಾಗಮ'** ಕಲಿಕಾ ಯೋಜನೆಯನ್ನು ಹೊರ ತಂದಿರುತ್ತದೆ. **'ಸಂವೇದನಾ'** ಕಾರ್ಯಕ್ರಮದಲ್ಲಿ ದೂರದರ್ಶನದ ಮುಖಾಂತರ ಬೋಧನೆಯನ್ನು ಮುಂದುವರೆಸಲಾಗಿರುತ್ತದೆ. ಖಾಸಗಿ ಅನುದಾನ ರಹಿತ ಶಾಲೆಗಳು ಸಹ ತಮ್ಮ ಶಾಲೆಯಲ್ಲಿ ದಾಖಲಾಗುವ ಮಕ್ಕಳ ನಿರಂತರ ಕಲಿಕೆಯನ್ನು ಮುಂದುವರೆಸಲು 'ವಿದ್ಯಾಗಮ' ಹಾಗೂ 'ಸಂವೇದನಾ' ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅಥವಾ ತಮ್ಮದೇ ಆದ ಪರ್ಯಾಯ ಕಾರ್ಯಕ್ರಮವನ್ನು ರೂಪಿಸಿಕೊಳ್ಳಲು ಸೂಚಿಸಿದೆ. ಪರ್ಯಾಯ ಕಾರ್ಯಕ್ರಮಕ್ಕೆ ವಿದ್ಯಾರ್ಥಿ / ಪೋಷಕರುಗಳಿಂದ ಯಾವುದೇ ಹೆಚ್ಚುವರಿ ಶುಲ್ಕವನ್ನು ಪಡೆಯುವಂತಿಲ್ಲ. ಎಲ್ಲಾ ಶಾಲೆಗಳು ಇಲಾಖೆಯು ನಿಗದಿಪಡಿಸಿರುವ ಶೈಕ್ಷಣಿಕ ವೇಳಾಪಟ್ಟಿಯನ್ನು ತಪ್ಪದೇ ಅನುಷ್ಠಾನ ಮಾಡಲು ಕ್ರಮ ಕೈಗೊಳ್ಳುವುದು.

Scanned by CamScanner

ಮುಂದುವರೆದು, ಖಾಸಗಿ ಅನುದಾನ ರಹಿತ ಶಾಲೆಗಳು ವಿದ್ಯಾರ್ಥಿಗಳ ಪೋಷಕರುಗಳಿಂದ ಪಡೆಯುವ ಶುಲ್ಕದ ಮೊತ್ತದಿಂದ ಪ್ರಥಮ ವೆಚ್ಚವನ್ನಾಗಿ ತಮ್ಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರ ವೇತನವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು ಹಾಗೂ ಈ ಕುರಿತು ಯಾವುದೇ ದೂರಗಳು ಬಾರದಂತೆ ಕ್ರಮ ವಹಿಸುವುದು.

5/9/20

**ಆಯುಕ್ತರು,**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಗೆ :**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ ವಿಭಾಗ
2. ಸಾರ್ವಜನಿಕ ಶಿಕ್ಷಣ ಇಲಾಖೆ ಎಲ್ಲಾ ನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಇವರು ಎಲ್ಲಾ ಖಾಸಗಿ ಅನುದಾನರಹಿತ ಆಡಳಿತ ಮಂಡಳಿ ಹಾಗೂ ಅನುದಾನರಹಿತ ಶಾಲಾ ಮುಖ್ಯಸ್ಥರುಗಳಿಗೆ ಸುತ್ತೋಲೆಯನ್ನು ತಲುಪಿಸುವುದು)

**ಪ್ರತಿಯನ್ನು ಮಾಹಿತಿಗಾಗಿ**

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರುವಂತೆ ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಿಕ್ಷಣ, ಬೆಂಗಳೂರು.
3) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ – ಕರ್ನಾಟಕ, ಬೆಂಗಳೂರು

Scanned by CamScanner